ವಿರೋಧ ಪಕ್ಷದ ನಾಯಕರಿಗೆ ಕೊಲೆ ಬೆದರಿಕೆ ಪತ್ರ ಬರೆದಿರುವುದು

2122 (2366) - ಶ್ರೀ ಸದಾನಂದ ಗೌಡ ಡಿ.ವಿ. (ಪುತ್ತೂರು) : ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿಧಾನ ಸಭೆಯ ವಿರೋಧ ಪಕ್ಷದ ನಾಯಕರಿಗೆ ಪ್ರಾಣ ಬೆದರಿಕೆ ಪತ್ರ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ವಿಚಾರದಲ್ಲಿ ಸರ್ಕಾರ ತನಿಖೆ ನಡೆಸಿದೆಯೇ ಇಲ್ಲದಿದ್ದಲ್ಲಿ, ಅದರ ಅವಶ್ಯಕತೆ ಕಂಡು ಬಂದಿಲ್ಲವೇ;

ಇ) ಪ್ರಾಣ ಬೆದರಿಕೆ ಹಿನ್ನೆಲೆಯಲ್ಲಿ ವಿರೋಧ ಪಕ್ಷದ ನಾಯಕರಿಗೆ ನೀಡಲಾಗಿರುವ ಭದ್ರತೆಯನ್ನು ಹೆಚ್ಚಿಸಲಾಗಿದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು):

ಅ) ಹೌದು.

ಆ) ಅನಾಮದೇಯ ವ್ಯಕ್ತಿಯನ್ನು ಪತ್ತೆ ಹಚ್ಚಲು ಕ್ರಮ ಕೈಗೊಳ್ಳಲಾಗಿದೆ.

ಇ) ಶ್ರೀ ಜಗದೀಶ್ ಶೆಟ್ಟರ್ ಮಾನ್ಯ ವಿರೋಧ ಪಕ್ಷದ ನಾಯಕರು ಇವರ ಭದ್ರತೆಗಾಗಿ. 3 ಜನ ಅಂಗರಕ್ಷಕರನ್ನು ಹಾಗೂ 3 ಜನ ನಿರಾಸದ ಕಾವಲುಗಾರರನ್ನು ನಿಯೋಜಿಸಲಾಗಿದೆ.

ಕೋಲಾರ ಜಿಲ್ಲೆಯಲ್ಲಿ ಅಕ್ರಮ ಮರಳು ಸಾಗಾಣಿಕೆ

2123 (2141) - ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) : ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಅಂತರ್ಜಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಂತರ್‌ಜಲ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತರ್ ಜಲವನ್ನು ಹೆಚ್ಚಿಸಲು ಯಾವ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ;

ಆ) ಕೋಲಾರ ಜಿಲ್ಲೆಯಲ್ಲಿ ಅತಿಕ್ರಮವಾಗಿ ಮರಳು ಸಾಗಾಣಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ರಸ್ತೆಗಳು ಹಾಳಾಗಿ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಮರಳು ಸಾಗಾಣಿಕೆಯ ಗುತ್ತಿಗೆದಾರರ ವಿವರಣೆಯನ್ನು ತಾಲ್ಲೂಕುವಾರು ನೀಡುವುದು?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂ ವಿಜ್ಞಾನ ಹಾಗೂ ಅಂತರ್ಜಲ ಸಚಿವರು):

ಅ) ಬಂದಿದೆ. ರಾಜ್ಯದಾದ್ಯಂತ ಕುಸಿಯುತ್ತಿರುವ ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಸಲುವಾಗಿ, ಇಲಾಖೆಯು ವಿವಿಧ ಅಂತರ್ಜಲ ಕೃತಕ ಮರು ಪೂರೈಕೆ ರಚನೆಗಳನ್ನು ಕ್ಲಿಷ್ಟಕರವೆಂದು ಘೋಷಿಸಿರುವ ತಾಲ್ಲೂಕುಗಳಲ್ಲಿ ನಿರ್ಮಾಣ ಮಾಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಈ ಕಾರ್ಯಕ್ರಮದಂತೆ ಎಲ್ಲಾ ಜಿಲ್ಲೆಗಳಲ್ಲಿ ಕಳೆದ 5 ವರ್ಷಗಳ ಅವಧಿಯಲ್ಲಿ ಒಟ್ಟು634 ಸಂಖ್ಯೆಯ ವಿವಿಧ ರಚನೆಗಳನ್ನು ನಿರ್ಮಾಣ ಮಾಡಲಾಗಿದೆ.

ಆ) ಬಂದಿದೆ.

ಇ) ಕೋಲಾರ ಜಿಲ್ಲೆಯಲ್ಲಿ ತಾಲ್ಲೂಕುವಾರು ಮರಳು ಸಾಗಾಣಿಕೆ ಗುತ್ತಿಗೆದಾರರ ವಿವರವನ್ನು ಅನುಬಂಧ - 1 ರಲ್ಲಿ ನೀಡಿದೆ.